ಇ) ಕರ್ನಾಟಕ ಸರ್ಕಾರ ಕಿಯಾನಿಕ್ಸ್‌ಗೆ ಮಂಗಳೂರಿನಲ್ಲಿ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್‌ನ್ನು ಸ್ಥಾಪಿಸಲು ಒಪ್ಪಿಗೆ ನೀಡಿದ್ದಾರೆ. ಈ ಸಾಫ್ಟವೇರ್ ಟೆಕ್ನಾಲಜಿ ಪಾರ್ಕ್‌ನಲ್ಲಿ ಆರ್ಸ್ಟೇಷನ್‌ನ್ನು ಕೂಡ ಸ್ಥಾಪಿಸಲು ಉದ್ದೇಶಿಸಿದೆ ಮತ್ತು ಇದರಿಂದ ರಫ್ತು ಹೆಚ್ಚುವುದು. ಇದರ ಯೋಜನಾ ವೆಚ್ಚ ಸುಮಾರು 3.5 ಕೋಟಿ ರೂ.ಗಳಾಗುವುದು. ಈ ವೆಚ್ಚವನ್ನು ಕರ್ನಾಟಕ ಸರ್ಕಾರದ ಅನುದಾನದಿಂದ ಪಡೆಯುವ ಯೋಜನೆಯಿದೆ.

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಂಗಳೂರು ಕ್ಷೇತ್ರಕ್ಕೆ ಬಿಡುಗಡೆಯಾದ ಹಣ.

22(227) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಂಗಳೂರು ಕ್ಷೇತ್ರಕ್ಕೆ ಹಣ ಬಿಡುಗಡೆಯಾಗದೇ ಇರುವುದರಿಂದ ಅಭಿವೃದ್ಧಿ ಚಟುವಟಿಕೆಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹಣ ಬಿಡುಗಡೆ ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ. ವೆಂಕಟೇಶ್ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು) :—

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.

ಮಂಗಳೂರು ನಗರದಲ್ಲಿ ವಿದ್ಯುತ್ ವಿತರಣಾ ಕೇಂದ್ರ ಹಾಗೂ ವಿತರಣಾ ವ್ಯವಸ್ಥೆಯಲ್ಲಿ ಸುಧಾರಣೆ.

23 (226) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ನಗರದ ವಿದ್ಯುತ್ ವಿತರಣಾ ಕೇಂದ್ರ ಹಾಗೂ ವಿತರಣಾ ವ್ಯವಸ್ಥೆ ಸುಧಾರಿಸುವ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು? ಹಾಗೂ ಇದಕ್ಕೆ ತಗುಲಿದ ವೆಚ್ಚವೆಷ್ಟು?